**APRIL 13, 2024**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **ಲೋಕಸಭೆ ಚುನಾವಣೆ; ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಲ್ಲಿ, ಹಿರಿಯ ನಾಗರಿಕರ ಮತದಾನ, ಇಂದಿನಿಂದ ಆರಂಭ.**
- **26ನೇ ತಾರೀಖು, ರಾಜ್ಯದ ಮೊದಲ ಹಂತದ ಚುನಾವಣೆ; ಜಿಲ್ಲಾಡಳಿತಗಳಿಂದ ಸಕಲ ಸಿದ್ಧತೆ.**
- **2006ರ ಜನವರಿ 1 ಮತ್ತು ಮಾರ್ಚ್ 31ರ ನಡುವೆ ಜನಿಸಿದವರು, ಸದ್ಯದಲ್ಲೇ ಮತದಾರರ ಪಟ್ಟಿಗೆ ಸೇರ್ಪಡೆ – ಮನೋಜ್ ಕುಮಾರ್ ಮೀನಾ.**
- **ರಾಜ್ಯದ ಹಲವೆಡೆ ಬರ; ಕುಡಿಯುವ ನೀರಿನ ಸಮರ್ಪಕ ಪೂರೈಕೆ ಖಾತ್ರಿಗೆ, ಜಿಲ್ಲಾಡಳಿತಗಳ ಆದ್ಯತೆ.**

<><><>

**ಈಗ ವಾರ್ತೆಗಳ ವಿವರ**

<><><>

**ಪ್ರಸಕ್ತ 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ, ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಲ್ಲಿ ಇಂದಿನಿಂದ ಹಿರಿಯ ನಾಗರಿಕರ ಮತದಾನ ಆರಂಭವಾಗಲಿದೆ. ಮತದಾರರ ಪಟ್ಟಿಯಲ್ಲಿ, 85 ವರ್ಷಕ್ಕಿಂತ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಮನೆಯಿಂದಲೇ ಮತದಾನಕ್ಕೆ ಚುನಾವಣಾ ಆಯೋಗ ಅವಕಾಶ ಕಲ್ಪಿಸಿದೆ. ಗುರುವಾರ 18ನೇ ತಾರೀಖಿನ ವರೆಗೆ, ಒಟ್ಟು 6 ದಿನ ಮನೆಯಿಂದ ಅಂಚೆ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಅಧಿಕಾರಿಗಳ ತಂಡ ಅರ್ಜಿ ಸಲ್ಲಿಕೆ ಮಾಡಿದ ಪ್ರತಿ ಮತದಾರರ ಮನೆಗೆ ತೆರಳಿ, ಮತದಾರರಿಂದ ಅಂಚೆ ಮತದಾನ ಪಡೆಯಲಿದೆ.**

<><><>

ಬೆಂಗಳೂರಿನ 3 ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ, ಒಟ್ಟು 6 ಸಾವಿರದ 372 ಜನ ಹಿರಿಯ ನಾಗರಿಕರು ಮತ್ತು ವಿಶೇಷಚೇತನ ಮತದಾರರು ಮನೆಯಿಂದ ಮತದಾನಕ್ಕೆ ಹೆಸರು ನೋಂದಾಯಿಸಿಕೊಂಡಿದ್ದಾರೆ.

<><><>

ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ, ಹಾವೇರಿ ಹಾಗೂ ಗದಗ ಜಿಲ್ಲೆಯ ಎಂಟು ವಿಧಾನಸಭಾ ಕ್ಷೇತ್ರಗಳಿಂದ, ಸಾವಿರದ 600 ಜನ, ಮನೆಯಿಂದಲೇ ಮತದಾನ ಮಾಡಲು ಕೋರಿದ್ದಾರೆ ಎಂದು, ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಧ್ವನಿ 45 ಸೆಕೆಂದುಗಳು

<><><>

ಇದೇ ತಿಂಗಳ 26ನೇ ತಾರೀಖು, ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ, ಮೊದಲ ಹಂತದ ಚುನಾವಣೆ ನಡೆಯಲಿದೆ. ಮತದಾನ ನಡೆಯುವ ದಕ್ಷಿಣ ಕರ್ನಾಟಕದ 14 ಜಿಲ್ಲೆಗಳಲ್ಲಿ ಜಿಲ್ಲಾಡಳಿತಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿವೆ. ಮತದಾನದ ದಿನ, ಶುಕ್ರವಾರ 26 ರಂದು, ಆಯಾ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಲ್ಲ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳ ಮಾಲೀಕರು, ಅರ್ಹ ಮತದಾರರಾಗಿರುವ ಖಾಯಂ ಅಥವಾ ದಿನಗೂಲಿ ನೌಕರರು ಮತದಾನ ಮಾಡಲು, ಅನುಕೂಲವಾಗುವಂತೆ, ಒಂದು ದಿನದ ವೇತನ ಸಹಿತ ರಜೆಯನ್ನು ಘೋಷಿಸಲಾಗಿದೆ. ಮತದಾನದ ಪ್ರಮಾಣ ಹೆಚ್ಚಿಸಲು, ಜಿಲ್ಲಾ ಮಟ್ಟದ ಸ್ವೀಪ್ ಸಮಿತಿ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳು, ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿವೆ.

<><><>

ಈ 14 ಕ್ಷೇತ್ರಗಳಲ್ಲಿ ಒಟ್ಟು 2 ಕೋಟಿ 88 ಲಕ್ಷ 8 ಸಾವಿರದ 182 ಮತದಾರರಿದ್ದಾರೆ. 1 ಕೋಟಿ 44 ಲಕ್ಷ 17 ಸಾವಿರದ 530 ಪುರ ’ ಮತದಾರರು, 1 ಕೋಟಿ 43 ಲಕ್ಷ 87 ಸಾವಿರದ 585 ಮಹಿಳಾ ಮತದಾರರಿದ್ದಾರೆ. 3 ಸಾವಿರದ 67 ಲಿಂಗತ್ವ ಅಲ್ಪಸಂಖ್ಯಾತ ಮತದಾರರಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ.

<><><>

2006ರ ಜನವರಿ 1 ಮತ್ತು ಮಾರ್ಚ್ 31ರ ನಡುವೆ ಜನಿಸಿದವರನ್ನು, ಸದ್ಯದಲ್ಲೇ ಮತದಾರರ ಪಟ್ಟಿಗೆ ಸೇರಿಸಲಾಗುವುದು ಎಂದು, ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ. “ಯುವ ಮತದಾರರು ಮೊದಲ ಬಾರಿಗೆ ಮತ ಚಲಾಯಿಸಲು ಮುಂದಿನ ಚುನಾವಣೆಯ ವರೆಗೆ ಕಾಯಬೇಕಾಗುತ್ತದೆ, ಹೀಗಾಗಿ ‘ಫಾರ್ಮ್ 6’ ರ ನಿಬಂಧನೆಯ ಅಡಿಯಲ್ಲಿ ಅವಕಾಶ ನೀಡಲಾಗುತ್ತಿದೆ” ಎಂದು ಅವರು ಹೇಳಿದ್ದಾರೆ.

<><><>

ಈ ವ ’೯, 18 ವಯಸ್ಸು ತುಂಬಿದ, 70 ಸಾವಿರ ಯುವಜನತೆ, ಲೋಕಸಭೆ ಚುನಾವಣೆಯಲ್ಲಿ ಮತದಾನ ಮಾಡಲಿದ್ದಾರೆ ಎಂದು, ಚುನಾವಣಾ ಆಯೋಗ ತಿಳಿಸಿದೆ. ಕೊನೇ ಕ್ಷಣದ ಪ್ರಯತ್ನದಲ್ಲಿ ಅವರ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗಿದೆ. ಮುಂದಿನ ಕೆಲವೇ ದಿನಗಳಲ್ಲಿ 2 ಸಾವಿರಕ್ಕೂ ಹೆಚ್ಚು ಯುವ ಮತದಾರರು ಪಟ್ಟಿಗೆ ಸೇರ್ಪಡೆಯಾಗುವ ನಿರೀಕ್ಷೆ ಇದೆ ಎಂದು ಚುನಾವಣಾ ಆಯೋಗ ಹೇಳಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಕಡ್ಡಾಯ ಮತದಾನ ಕುರಿತು, ಜನ ಜಾಗೃತಿಗಾಗಿ ಉಡುಪಿ ಜಿಲ್ಲೆಯ ಕೇಂದ್ರ ಹಾಗೂ ರಾಜ್ಯ ಲೋಕ ಸೇವಾ ಆಯೋಗದ ಅಧಿಕಾರಿಗಳು, ಯಕ್ಷಗಾನದ ವೇ ’ ಧರಿಸಿ, ಗಮನ ಸೆಳೆದಿದ್ದಾರೆ. ಉಡುಪಿ ಜಿಲ್ಲಾ ಪಂಚಾಯ್ತಿ ಸಿ.ಇ.ಓ ಪ್ರತೀಕ್ ಬಾಯಲ್, ಅಪರ ಜಿಲ್ಲಾಧಿಕಾರಿ ಮಮತಾ ದೇವಿ, ಕುಂದಾಪುರ ಉಪವಿಭಾಗದ ಸಹಾಯಕ ಆಯುಕ್ತೆ ರಶ್ಮಿ, ಕರಾವಳಿ ಕಾವಲು ಪಡೆ ಪೊಲೀಸ್ ಅಧೀಕ್ಷಕ ಮಿಥುನ್ ಅವರು, ಬಡಗುತಿಟ್ಟು ಯಕ್ಷಗಾನ ಶೈಲಿಯ ವೇ ’ ಭೂ ’ಣ ಧರಿಸಿ, ಮತದಾನ ಮಾಡುವಂತೆ ಜಿಲ್ಲೆಯ ಪ್ರಮುಖ ಸ್ಥಳಗಳಲ್ಲಿ ಜಾಗೃತಿ ಮೂಡಿಸಿದರು.

ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಪ್ರತೀಕ್ ಬಾಯಲ್ ಸ್ವೀಪ್ ಚಟುವಟಿಕೆ ವಿನೂತನವಾಗಿ ಆಯೋಜಿಸಿದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಸಿ.ಇ.ಓ. ಪ್ರತೀಕ್ ಬಾಯಲ್ ಧ್ವನಿ 45 ಸೆಕೆಂದುಗಳು

<><><>

ಶಿವಮೊಗ್ಗ ಜಿಲ್ಲೆ ಸಾಗರದ ಪ್ರಸಿದ್ಧ ಶ್ರೀ ಮಹಾ ಗಣಪತಿ ರಥೋತ್ಸವದಲ್ಲಿ, ಸ್ವೀಪ್ ಸಮಿತಿ ಮತದಾನದ ಮಹತ್ವ ಕುರಿತು ಜನ ಜಾಗೃತಿ ಮೂಡಿಸಿತು.

<><><>

ಯಾದಗಿರಿ ಜಿಲ್ಲೆ, ಸುರಪುರ ವಿಧಾನಸಭಾ ಕ್ಷೇತ್ರದ, ಪರಿಶಿ ್ಟ ಪಂಗಡ ಮೀಸಲು ಕ್ಷೇತ್ರದ ಉಪಚುನಾವಣೆಗೆ, ಬಿಜೆಪಿ ಅಭ್ಯರ್ಥಿ ನರಸಿಂಹ ನಾಯಕ್ ನಾಮಪತ್ರ ಸಲ್ಲಿಸಿದ್ದಾರೆ.

ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ, ಪಕ್ಷೇತರ ಅಭ್ಯರ್ಥಿಯಾಗಿ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ, ಸೇರಿದಂತೆ 6 ಜನ ನಾಮಪತ್ರ ಸಲ್ಲಿಸಿದ್ದಾರೆ.

ಕೊಪ್ಪಳ ಲೋಕಸಭಾ ಕ್ಷೇತ್ರದಿಂದ, ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿ ಬಸವರಾಜ ಕ್ಯಾವಟರ್, ಸೇರಿದಂತೆ ಒಟ್ಟು ನಾಲ್ವರು ನಾಮಪತ್ರ ಸಲ್ಲಿಸಿದ್ದಾರೆ.

ಬಳ್ಳಾರಿ ಬಿಜೆಪಿ ಅಭ್ಯರ್ಥಿಯಾಗಿ, ಬಿ.ಶ್ರೀರಾಮುಲು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸಂಡೂರು ಶಾಸಕ ಈ.ತುಕರಾಂ ನಾಮಪತ್ರ ಸಲ್ಲಿಸಿದ್ದಾರೆ.

ಹಾವೇರಿ ಕ್ಷೇತ್ರದಿಂದ, ಬಹುಜನ ಸಮಾಜ ಪಕ್ಷದ ಅಭ್ಯರ್ಥಿಯಾಗಿ, ಸಣ್ಣ ಮೌಲಾಸಾಬ್ ಗಣಜೂರ್,

ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ, ಡಾಕ್ಟರ್ ಪ್ರಭಾ ಮಲ್ಲಿಕಾರ್ಜುನ ಮತ್ತು ಭಾರತೀಯ ಕಮ್ಯೂನಿಸ್ಟ್ ಪಕ್ಷದಿಂದ ಅಣಬೇರು ತಿಪ್ಪೇಸ್ವಾಮಿ ಸೇರಿದಂತೆ, ಒಟ್ಟು ಐವರು ನಾಮಪತ್ರ ಸಲ್ಲಿಸಿದ್ದಾರೆ.

ಬೆಳಗಾವಿ ಲೋಕಸಭಾ ಮತಕ್ಷೇತ್ರದಿಂದ, ಉತ್ತಮ ಪ್ರಜಾಕೀಯ ಪಕ್ಷದಿಂದ ಮಲ್ಲಪ್ಪ ಚನ್ನಪ್ಪ ಚೌಗಲಾ, ಬಾಗಲಕೋಟೆ ಮತ ಕ್ಷೇತ್ರದಿಂದ ಮೂವರು, ಕಾರವಾರದಿಂದ ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ನಾಲ್ವರು..

ರಾಯಚೂರು ಲೋಕಸಭಾ ಕ್ಷೇತ್ರಕ್ಕೆ, ಕಲಬುರಗಿಯ ಭಾರತೀಯ ಜನ ಸಾಮ್ರಾಟ್ ಪಕ್ಷದ ಶಾಮರಾವ್ ಮೇದಾರ್ ಉಮೇದುವಾರಿಕೆ ಸಲ್ಲಿಸಿದ್ದಾರೆ.

ಕಲಬುರಗಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ರಾಧಾಕೃ ್ಣ ದೊಡ್ಡಮನಿ ಸೇರಿದಂತೆ, ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದರು.

ಕರ್ನಾಟಕ ರಾ ್ಟ್ರ ಸಮಿತಿ ಪಕ್ಷದಿಂದ ನಾಗಪ್ಪ ಕರೆಣ್ಣವರ ಧಾರವಾಡ ಲೋಕಸಭಾ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ್ದಾರೆ.

<><><>

ಚಾಮರಾಜನಗರ ಜಿಲ್ಲೆಯಾದ್ಯಂತ, ಬರಗಾಲದ ಹಿನ್ನೆಲೆ, ಜಾನುವಾರುಗಳಿಗೆ ಮೇವಿನ ಕೊರತೆ ಕಂಡು ಬಂದಲ್ಲಿ, ಉಚಿತ ಸಹಾಯವಾಣಿ 1077ಕ್ಕೆ ಕರೆ ಮಾಡುವಂತೆ, ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಶಿಲ್ಪಾ ನಾಗ್ ತಿಳಿಸಿದ್ದಾರೆ.

<><><>

ಬೇಸಿಗೆ ಹಿನ್ನೆಲೆ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ, ಜಿಲ್ಲೆಯ ಎಲ್ಲ ತಾಲೂಕುಗಳ ಗೋಕಟ್ಟೆಗಳಲ್ಲಿ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ಎಂದು, ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ್ ತಿಳಿಸಿದ್ದಾರೆ.

<><><>

ಗದಗ ಜಿಲ್ಲೆಯಲ್ಲಿ ಬಿಸಿಲು ಏರುಗತಿಯಲ್ಲಿದ್ದು, ಮುಂಗಾರು ಮಳೆ ಆರಂಭದ ವರೆಗೆ, ಜಿಲ್ಲಾದ್ಯಂತ ಕುಡಿಯುವ ನೀರಿನ ಸಮರ್ಪಕ ಪೂರೈಕೆ, ಖಾತ್ರಿ ಪಡಿಸುವಂತೆ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಜಿಲ್ಲಾಡಳಿತದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು. ತುಂಗಭದ್ರಾ ಮತ್ತು ಮಲಪ್ರಭಾ ನದಿ ಮೂಲಗಳಿಂದ, ಟ್ಯಾಂಕರ್ ಮೂಲಕ ಮತ್ತು ಕೊಳವೆ ಬಾವಿ ಮೂಲಗಳಿಂದ, ಕುಡಿಯುವ ನೀರು ಪೂರೈಸಲಾಗುತ್ತಿದ್ದು, ಸಾರ್ವಜನಿಕರಿಂದ ದೂರು ಬಾರದಂತೆ ಗಮನ ಹರಿಸುವುದು ಪ್ರಥಮ ಆದ್ಯತೆ, ಎಂದರು.

<><><>

ಮಂಗಳೂರು ಹೊರವಲಯದ ಅಡ್ಯಾರ್‌ನ, ಎಳನೀರು ಸಂಸ್ಕರಣಾ ಘಟಕವೊಂದರಿಂದ ಖರೀದಿಸಿದ, ಎಳ ನೀರು ಕುಡಿದು, 138 ಮಂದಿ ಅಸ್ವಸ್ಥಗೊಂಡಿದ್ದಾರೆ. ಮಾದರಿಗಳನ್ನು ಸಂಗ್ರಹಿಸಿ, ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದು, ಸದ್ಯದಲ್ಲೇ ವರದಿ ಬರಲಿದೆ. ಯಾರೂ ತೀವ್ರವಾಗಿ ಅಸ್ವಸ್ಥಗೊಂಡಿಲ್ಲ, ಹೊರ ರೋಗಿಗಳಾಗಿ ಚಿಕಿತ್ಸೆ ಪಡೆದು ತೆರಳಿದ್ದಾರೆ ಎಂದು ದಕ್ಷಿಣಕನ್ನಡ ಜಿಲ್ಲೆ ಆರೋಗ್ಯಾಧಿಕಾರಿ ಡಾಕ್ಟರ್ ಎಚ್.ಆರ್.ತಿಮ್ಮಯ್ಯ ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ದಕ್ಷಿಣಕನ್ನಡ ಜಿಲ್ಲೆಯಾದ್ಯಂತ ಹೊಟೇಲ್, ಬೀದಿ ಬದಿ ಆಹಾರ ತಯಾರಿಸುವ ಘಟಕಗಳ ಮೇಲೆ ನಿಗಾ ಇರಿಸಲಾಗಿದೆ. ಕಲಬೆರಕೆ, ಬಣ್ಣಗಳ ಬಳಕೆ ಹಾಗೂ ಪ್ಲಾಸ್ಟಿಕ್ ಪೊಟ್ಟಣಗಳಲ್ಲಿ ಆಹಾರ ಪೂರೈಕೆ ಬಗ್ಗೆ, ನಿಗಾ ವಹಿಸಲಾಗುತ್ತಿದೆ ಎಂದು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪರಿಶೀಲನಾಧಿಕಾರಿ ಪ್ರವೀಣ್ ಕುಮಾರ್ ತಿಳಿಸಿದ್ದಾರೆ.

<><><>

ಬಳ್ಳಾರಿ, ಚಿತ್ರದುರ್ಗ, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳ, ಗಣಿಗಾರಿಕೆ ಬಾಧಿತ ಪ್ರದೇಶಗಳ ಪರಿಸರ ಪುನಃಶ್ಚೇತನ ಸೇರಿದಂತೆ, ಆರೋಗ್ಯ, ಶಿಕ್ಷಣ, ಕೃಷಿ ಹಾಗೂ ಆದಾಯ ಸುಧಾರಣೆಗೆ, ಬಳ್ಳಾರಿಯ ಡಿಸ್ಟ್ರಿಕ್ಟ್ ಮಿನರಲ್ ಫೌಂಡೇಷನ್ ಟ್ರಸ್ಟ್ ಮೂಲಕ, 25 ಸಾವಿರ ಕೋಟಿ ರೂಪಾಯಿ, ಹಣ ಬಳಕೆಯಾಗಲಿದೆ.

ಸರ್ವೋಚ್ಚ ನ್ಯಾಯಾಲಯದ ಉನ್ನತಾಧಿಕಾರ ಪ್ರಾಧಿಕಾರದ ಮುಖ್ಯಸ್ಥ, ನ್ಯಾಯಮೂರ್ತಿ ಬಿ.ಸುದರ್ಶನ ರೆಡ್ಡಿ ನೇತೃತ್ವದ ಸಮಿತಿ ಸಲ್ಲಿಸಿದ, ಗಣಿಗಾರಿಕೆ ಬಾಧಿತ ಜಿಲ್ಲೆಗಳ ಪರಿಸರ ಪುನಃಶ್ಚೇತನ ಕಾರ್ಯಯೋಜನೆಗೆ – ಸುಪ್ರೀಂಕೋರ್ಟ್ ನೀಡಿರುವ ಆದೇಶ ಸ್ವಾಗತಾರ್ಹ ಎಂದು, ಸಮಾಜ ಪರಿವರ್ತನ ಸಮುದಾಯ ಮುಖ್ಯಸ್ಥ ಎಸ್.ಆರ್.ಹಿರೇಮಠ, ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ, ತಿಳಿಸಿದ್ದಾರೆ.

<><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಲ್ಲಲ್ಲಿ, ಇಂದಿನಿಂದ 18ರ ವರೆಗೆ, ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು, ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ, ಬೆಳಗಾವಿ, ಬೀದರ್, ಕಲಬುರಗಿ, ರಾಯಚೂರು, ವಿಜಯಪುರ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಹಾಸನ, ಕೊಡಗು, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು ಜಿಲ್ಲೆಗಳಲ್ಲಿ ಜೋರು ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಧಾರವಾಡ, ಗದಗ್, ವಿಜಯಪುರ, ಹಾವೇರಿ, ಕೊಪ್ಪಳ, ಕೊಡಗು, ಯಾದಗಿರಿ, ಶಿವಮೊಗ್ಗ ಜಿಲ್ಲೆಗಳಲ್ಲಿ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ.

<><><>

ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆ, ದೇವರ ದಾಸಿಮಯ್ಯ ಜಯಂತಿಯನ್ನು, ಇಂದು ರಾಜ್ಯಾದ್ಯಂತ ಸರಳವಾಗಿ ಆಚರಿಸಲಾಗುತ್ತಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಲೋಕಸಭೆ ಚುನಾವಣೆ; ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಲ್ಲಿ, ಹಿರಿಯ ನಾಗರಿಕರ ಮತದಾನ, ಇಂದಿನಿಂದ ಆರಂಭ.
- 26ನೇ ತಾರೀಖು, ರಾಜ್ಯದ ಮೊದಲ ಹಂತದ ಚುನಾವಣೆ; ಜಿಲ್ಲಾಡಳಿತಗಳಿಂದ ಸಕಲ ಸಿದ್ಧತೆ.
- 2006ರ ಜನವರಿ 1 ಮತ್ತು ಮಾರ್ಚ್ 31ರ ನಡುವೆ ಜನಿಸಿದವರು, ಸದ್ಯದಲ್ಲೇ ಮತದಾರರ ಪಟ್ಟಿಗೆ ಸೇರ್ಪಡೆ – ಮನೋಜ್ ಕುಮಾರ್ ಮೀನಾ.
- ರಾಜ್ಯದ ಹಲವೆಡೆ ಬರ; ಕುಡಿಯುವ ನೀರಿನ ಸಮರ್ಪಕ ಪೂರೈಕೆ ಖಾತ್ರಿಗೆ, ಜಿಲ್ಲಾಡಳಿತಗಳ ಆದ್ಯತೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ